ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 01 ಎಂಎಸ್‌ಸಿ 2017 | 11 35

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 26.07.2017

## ಸುತ್ತೋಲೆ

**ವಿಷಯ:** ತಾಂತ್ರಿಕ ಶಿಕ್ಷಣ ಇಲಾಖಾ ಅಧೀನದಲ್ಲಿ ಬರುವ ಸಂಸ್ಥೆಗಳಲ್ಲಿ ಅಂಶಕಾಲಿಕ ಅಕುಶಲದಾಳುಗಳ (part time menials) ಸೇವೆ ಪಡೆಯುವುದನ್ನು ಸ್ಥಗಿತಗೊಳಿಸುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ: ಆಇ 05 ಟಿಎಫ್‌ಪಿ 2012 ದಿನಾಂಕ:25.06.2012
2. ಸರ್ಕಾರದ ಆದೇಶ ಸಂಖ್ಯೆ: ಆಇ 03 ಟಿಎಫ್‌ಪಿ 2017 ದಿನಾಂಕ: 07.07.2017

******

ಸಾದಿಲ್ವಾರು ವೆಚ್ಚ ಕೈಪಿಡಿ ನಿಯಮ 7ರ ಟಿಪ್ಪಣಿ-2 ಮತ್ತು 55 (2) (ಬಿ) ಪ್ರಕಾರ ಎಲ್ಲಾ ಇಲಾಖಾ ಮುಖ್ಯಸ್ಥರುಗಳು ಮತ್ತು ಇತರೆ ಅಧಿಕಾರಿಗಳಿಗೆ ಒಟ್ಟಾರೆ ಮೂರು ವರ್ಷಗಳ ಅವಧಿ ಮೀರದಂತೆ ಸಾದಿಲ್ವಾರು ವೆಚ್ಚದಲ್ಲಿ ಅನಿಪುಣ ಅಂಶಕಾಲಿಕ ಕೆಲಸದಾಳುಗಳ ಸೇವೆಯನ್ನು ಪಡೆಯುವುದನ್ನು ಮನಃ ಪ್ರಾರಂಭಿಸಲು ಮತ್ತು ಮಾಸಿಕ ಸಂಚಿತ ಸಂಭಾವನೆಯನ್ನು ಮಂಜೂರು ಮಾಡುವ ಆರ್ಥಿಕ ಅಧಿಕಾರವನ್ನು ಪ್ರತ್ಯಾಯೋಜಿಸಲು ಮಂಜೂರಾತಿಯನ್ನು ಉಲ್ಲೇಖ (1)ರ ಸರ್ಕಾರಿ ಆದೇಶದಲ್ಲಿ ನೀಡಲಾಗಿತ್ತು. ಈ ಹಿನ್ನೆಲೆಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖಾ ಅಧೀನದಲ್ಲಿ ಬರುವ ಸಂಸ್ಥೆಗಳಲ್ಲಿ ಅನಿಪುಣ ಅಂಶಕಾಲಿಕ ಕೆಲಸದಾಳುಗಳ ಸೇವೆಯನ್ನು ಪಡೆಯುತ್ತಿರುವುದಕ್ಕೆ ಅನುಮೋದನೆ ನೀಡಲಾಗುತ್ತಿತ್ತು.

ಉಲ್ಲೇಖ (2) ರ ಆದೇಶದಲ್ಲಿ ಸಾದಿಲ್ವಾರು ವೆಚ್ಚ ಕೈಪಿಡಿ 1958ರ ನಿಯಮ 55 (2) (ಬಿ)ಯನ್ನು ತಕ್ಷಣದಿಂದ ಸ್ಥಗಿತಗೊಳಿಸಲು ಸೂಕ್ತ ಕ್ರಮ ಕೈಗೊಳ್ಳತಕ್ಕದ್ದು ಕಾರ್ಯನಿರ್ವಹಿಸುತ್ತಿರುವ ಹಾಗೂ ಆದೇಶ ಸಂಖ್ಯೆ: ಆಇ 05 ಟಿಎಫ್‌ಪಿ 2012 ದಿನಾಂಕ:25.06.2012 ರನ್ವಯ ಮಾಸಿಕ ಸಂಚಿತ ಸಂಭಾವನೆ ಪಡೆಯುತ್ತಿರುವ ಎಲ್ಲಾ ಅರೆಕಾಲಿಕ ಅಕುಶಲ ಕೆಲಸದಾಳುಗಳ ಸೇವೆಯನ್ನು ಅವರುಗಳ ನೇಮಕಾತಿ ಅವಧಿ ಪೂರೈಸಿದ ತಕ್ಷಣ ಬರಖಾಸ್ತು/ಮುಕ್ತಾಯಮಾಡತಕ್ಕದ್ದು ಎಂದು ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಆಇ 05 ಟಿಎಫ್‌ಪಿ 2012 ದಿನಾಂಕ:25.06.2012 ರನ್ವಯ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸಂಸ್ಥೆಗಳಲ್ಲಿ ಮಾಸಿಕ ಸಂಚಿತ ಸಂಭಾವನೆ ಮೇಲೆ ಸೇವೆ ಸಲ್ಲಿಸುತ್ತಿರುವ ಅನಿಪುಣ ಅಂಶಕಾಲಿಕ ಅಕುಶಲದಾಳುಗಳ (part time menials) ಸೇವೆಯನ್ನು ಅವರುಗಳ ನೇಮಕಾತಿ ಅವಧಿ ಪೂರೈಸಿದ ತಕ್ಷಣ ಬರಖಾಸ್ತು / ಮುಕ್ತಾಯಗೊಳಿಸಲು ಸೂಚಿಸಿದೆ. ಇಲ್ಲವಾದಲ್ಲಿ ಮುಂದಿನ ಆಗು ಹೋಗುಗಳಿಗೆ ಸಂಬಂಧಿಸಿದ ಪ್ರಾಚಾರ್ಯರನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

(...... 2)

ಕಛೇರಿ ಸ್ವಚ್ಛತೆ, ಕಛೇರಿ ಕಾವಲು, ಕೈತೋಟ ನಿರ್ವಹಣೆ ಮುಂತಾದ ಕೆಲಸಗಳನ್ನು ಸೇವಾ ನಿಯಮಾನುಸಾರ ಗುತ್ತಿಗೆ (service contract) ನೀಡುವ ಮೂಲಕ ನಿರ್ವಹಿಸಲು ತಿಳಿಸಿದೆ. ಇದಕ್ಕೆ ತಗಲುವ ವೆಚ್ಚವನ್ನು '051--ಸಾಮಾನ್ಯ ವೆಚ್ಚಗಳು' ರಡಿಯಲ್ಲಿ ಭರಿಸಲು ತಿಳಿಸಿದೆ.

ನಿರ್ದೇಶಕರು
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ಬೆಂಗಳೂರು

**ಇವರಿಗೆ,**

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು/ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು/ ಸರ್ಕಾರಿ ಪಾಲಿಟೆಕ್ನಿಕ್‌ಗಳು/ಜಿಆರ್‌ಐಸಿಪಿ/ಎಸ್‌ಆರ್‌ಸಿಬಿಎಂ ಪ್ರಾಂಶುಪಾಲರುಗಳಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.

ಪ್ರತಿ:

ಇ–ಆಡಳಿತ ವಿಭಾಗ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.

7095

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಾದಿಲ್ವಾರು ವೆಚ್ಚ ಕೈಪಿಡಿ 1958ರ ನಿಯಮ 55 (2) (ಬಿ) ರಡಿಯಲ್ಲಿ ಅಂಶಕಾಲಿಕ ಅಕುಶಲ ಕೆಲಸದಾಳುಗಳ (part time menials) ಸೇವೆ ಪಡೆಯುವುದನ್ನು ಸ್ಥಗಿತಗೊಳಿಸುವ ಬಗ್ಗೆ.

ಓದಲಾಗಿದೆ: ಸರ್ಕಾರದ ಆದೇಶ ಸಂ:ಆಇ 05 ಟಿಎಫ್‌ಪಿ 2012, ದಿ:25.6.2012

ಪ್ರಸ್ತಾವನೆ :-

ಸಾದಿಲ್ವಾರು ವೆಚ್ಚ ಕೈಪಿಡಿ 1958ರ ನಿಯಮ 55 (2) (ಬಿ)ರ ಪ್ರಕಾರ ಇಲಾಖಾ ಮುಖ್ಯಸ್ಥರುಗಳು ಪಿಂಚಣಿ ರಹಿತ ಸಿಬ್ಬಂದಿಯಡಿ ಅಕುಶಲ ಅಂಶಕಾಲಿಕ ಕೆಲಸದಾಳುಗಳನ್ನು (part time menials) ಅಂದರೆ ಮಸಾಲ್ಜಿಗಳು, ಕಸಗುಡಿಸುವವರು, ಕ್ಲೀನರುಗಳು, ಕಾವಲುಗಾರರು, ನೀರುಕೊಡುವವರು, ಭಂಗಿಗಳು, ತೋಟಿಗಳು ಹಾಗೂ ಮಾಲಿಗಳು ಮುಂತಾದವರುಗಳನ್ನು ಒಂದು ವರ್ಷಕ್ಕೆ ಮೀರದಂತೆ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿತ್ತು.

ಮೇಲೆ (1)ರಲ್ಲಿ ಓದಲಾದ ಆದೇಶದಲ್ಲಿ ಸಾದಿಲ್ವಾರು ವೆಚ್ಚ ಕೈಪಿಡಿ 55 (2)(ಬಿ)ರ ನಿಯಮಗಳನ್ವಯ ಎಲ್ಲಾ ಇಲಾಖಾ ಮುಖ್ಯಸ್ಥರುಗಳು ಮತ್ತು ಇತರೆ ಅಧಿಕಾರಿಗಳಿಗೆ 3 ವರ್ಷಗಳ ಅವಧಿ ಮೀರದಂತೆ ಸಾದಿಲ್ವಾರು ವೆಚ್ಚದಲ್ಲಿ ಅಕುಶಲ ಅಂಶಕಾಲಿಕ ಕೆಲಸದಾಳುಗಳ ಸೇವೆಯನ್ನು ಪಡೆಯಲು ಮತ್ತು ಮಾಸಿಕ ಸಂಚಿತ ಸಂಭಾವನೆಯನ್ನು ಮಂಜೂರು ಮಾಡುವ ಆರ್ಥಿಕ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ.

ಸಾದಿಲ್ವಾರು ವೆಚ್ಚ ಕೈಪಿಡಿ 1958ರ ಪ್ರಸ್ತಾವಿಕ ಭಾಗದಲ್ಲಿಯೇ ಸ್ಪಷ್ಟಪಡಿಸಿರುವಂತೆ ಈ ಕೈಪಿಡಿಯ ನಿಯಮಗಳನ್ನು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಮಾಡುವ ಸಾದಿಲ್ವಾರು ವೆಚ್ಚವನ್ನು ನಿಯಂತ್ರಿಸಲು ರಚಿಸಲಾಗಿದೆ.

ಸಾದಿಲ್ವಾರು ವೆಚ್ಚ ಕೈಪಿಡಿಯ ನಿಯಮ 2ರಲ್ಲಿ ವ್ಯಾಖ್ಯಾನಿಸಿರುವಂತೆ ಸರ್ಕಾರಿ ಕಛೇರಿಗಳನ್ನು ನಿರ್ವಹಿಸಲು ಮಾಡುವ ವಿವಿಧ ವೆಚ್ಚಗಳನ್ನು "ಸಾದಿಲ್ವಾರು ವೆಚ್ಚ"ವೆಂದು ಪರಿಗಣಿಸಲಾಗುವುದು. ಈ ಕೈಪಿಡಿಯಲ್ಲಿ ನಿಗದಿಪಡಿಸಿರುವ ವಿಧಿವಿಧಾನಗಳು ಸಾದಿಲ್ವಾರು ವೆಚ್ಚದ ಬಗ್ಗೆ ಮಾತ್ರ ಅನ್ವಯವಾಗುತ್ತದೆ. ವಿವಿಧ ಸಾದಿಲ್ವಾರು ವೆಚ್ಚಗಳನ್ನು ಭರಿಸಲು ಮಾತ್ರ ಈ ನಿಯಮಗಳನ್ನು ಅನ್ವಯಿಸಬಹುದಾಗಿದ್ದು, ಯಾವುದೇ ನೇಮಕಾತಿಗಳನ್ನು ಮಾಡಿಕೊಳ್ಳಲು ಅವಕಾಶವಿಲ್ಲ.

ಆದಾಗ್ಯೂ, ಈ ನಿಯಮಗಳ ಅವಕಾಶಗಳನ್ನು ತಪ್ಪಾಗಿ ಅರ್ಥೈಸಿ ಹುದ್ದೆಗಳೆದುರಿಗೆ ನೇಮಕಾತಿ ಮಾಡಿರುವುದು ಕಂಡು ಬಂದಿದೆ. ಇದು ನಿಯಮದ ಆಶಯಗಳಿಗೆ ವಿರುದ್ಧವಾಗಿದ್ದು, ಇಂತಹ ಕ್ರಮದಿಂದ ಕಾನೂನು ಮತ್ತು ಆಡಳಿತಾತ್ಮಕ ಸಮಸ್ಯೆಗಳು ಉದ್ಭವಿಸುವ ಸಂಭವವಿದೆ. ಅಲ್ಲದೆ, ಬದಲಾದ ಆಡಳಿತ ವ್ಯವಸ್ಥೆಯಲ್ಲಿ ಇಂತಹ ಪದ್ಧತಿಯ ಮುಂದುವರಿಕೆಯ ಅಗತ್ಯತೆಯ ಬಗ್ಗೆಯೇ ಪರಿಶೀಲಿಸಬೇಕೆಂದು ಮನಗಂಡು ಈ ಕೆಳಕಂಡಂತೆ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಆಇ 3 ಟಿಎಫ್‌ಪಿ 2017,**
**ಬೆಂಗಳೂರು ದಿನಾಂಕ:07-07-2017.**

ಪ್ರಸ್ತಾವನೆಯಲ್ಲಿ ವಿವರಿಸಿದ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ಸಾದಿಲ್ವಾರು ವೆಚ್ಚ ಕೈಪಿಡಿ ನಿಯಮ 55 (2) (ಬಿ)ಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದು ಪಡಿಸಿದೆ. ಇನ್ನು ಮುಂದೆ ಈ ಅವಕಾಶದಡಿ ಯಾವುದೇ ಅಂಶಕಾಲಿಕ ಅಕುಶಲ/ಅನಿಪುಣ ಕೆಲಸಗಾರರನ್ನು ನೇಮಿಸಿಕೊಳ್ಳುವುದನ್ನು ನಿರ್ಬಂಧಿಸಿದೆ.

ಕಛೇರಿ ಸ್ವಚ್ಛತೆ, ಕಛೇರಿ ಕಾವಲು, ಕೈತೋಟ ನಿರ್ವಹಣೆ ಮುಂತಾದ ಕೆಲಸಗಳನ್ನು ಸೇವಾ ಗುತ್ತಿಗೆ (Service contract) ನೀಡುವ ಮೂಲಕ ನಿರ್ವಹಿಸಲು ತಿಳಿಸಿದೆ. ಇದಕ್ಕೆ ತಗಲುವ ವೆಚ್ಚವನ್ನು '051–ಸಾಮಾನ್ಯ ವೆಚ್ಚಗಳು' ರಡಿಯಲ್ಲಿ ಭರಿಸಲು ತಿಳಿಸಿದೆ.

ಈ ನಿಯಮದಡಿ ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಹಾಗೂ ಆದೇಶ ಸಂಖ್ಯೆ:ಆಇ 5 ಟಿಎಫ್‌ಪಿ 2012, ದಿ:25.06.2012 ರನ್ವಯ ಮಾಸಿಕ ಸಂಚಿತ ಸಂಭಾವನೆ ಪಡೆಯುತ್ತಿರುವ ಎಲ್ಲಾ ಅರೆಕಾಲಿಕ ಅಕುಶಲ ಕೆಲಸದಾಳುಗಳ ಸೇವೆಯನ್ನು ಅವರುಗಳ ನೇಮಕಾತಿ ಅವಧಿ ಪೂರೈಸಿದ ತಕ್ಷಣ ಬರಖಾಸ್ತು/ಮುಕ್ತಾಯ ಮಾಡತಕ್ಕದ್ದು.

ಸಾದಿಲ್ವಾರು ವೆಚ್ಚ ಕೈಪಿಡಿ ನಿಯಮ 55 (2) (ಬಿ) ನಿಯಮಗಳಿಗೆ ಸೂಕ್ತ ತಿದ್ದುಪಡಿ ತರಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಿತ್ವಿಕ್ ಪಾಂಡೆ)
ಸರ್ಕಾರದ ಕಾರ್ಯದರ್ಶಿ (ಆ ಮತ್ತು ಸಂ)
ಆರ್ಥಿಕ ಇಲಾಖೆ

ಇವರಿಗೆ,

ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಲಾಗಿದೆ.

ಪ್ರತಿ:

1. ಮಹಾಲೇಖಪಾಲರು (ಎ ಮತ್ತು ಇ), ಪ್ರಧಾನ ಮಹಾಲೇಖಪಾಲರು (ಇ&ಆರ್‌ಎಸ್‌ಎ) ಮತ್ತು ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ), ಕರ್ನಾಟಕ, ರೆಸಿಡೆನ್ಸಿ ಪಾರ್ಕ್ ರಸ್ತೆ, ಅಂಚೆ ಪೆಟ್ಟಿಗೆ ಸಂ: 5329/5369, ಬೆಂಗಳೂರು–1.
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿ.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
6. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಬೆಂಗಳೂರು.
7. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು.
8. ಸರ್ಕಾರದ ಉಪ ಕಾರ್ಯದಶಿಗಳು/ಸರ್ಕಾರದ ಅಧೀನ ಕಾರ್ಯದರ್ಶಿಗಳು/ಶಾಖಾಧಿಕಾರಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
9. ಹೆಚ್ಚುವರಿ ಪ್ರತಿಗಳು.
10. ಶಾಖಾ ರಕ್ಷಿತ ಕಡತ.

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ಇಲಾಖೆಗಳ ಇಲಾಖಾ ಮುಖ್ಯಸ್ಥರುಗಳು ಮತ್ತು ಇತರೆ ಅಧಿಕಾರಿಗಳ ಸಾಮಾನ್ಯ ವಿತ್ತಾಧಿಕಾರ ಪ್ರತ್ಯಾಯೋಜಿಸುವ ಪರಿಷ್ಕರಣೆ ಬಗ್ಗೆ.

ಓದಲಾಗಿದೆ : 1. ಸರ್ಕಾರದ ಆದೇಶ ಸಂಖ್ಯೆ:ಆಇ 1:ಟಿಎಫ್‌ಪಿ 2001 ಬೆಂಗಳೂರು, ದಿನಾಂಕ:02-02-2001.

2. ಸರ್ಕಾರದ ಆದೇಶ ಸಂಖ್ಯೆ:ಆಇ 1:ಟಿಎಫ್‌ಪಿ 2009 ಬೆಂಗಳೂರು, ದಿನಾಂಕ:30-05-2009.

3. ಸರ್ಕಾರದ ಆದೇಶ ಸಂಖ್ಯೆ:ಆಇ 2:ಟಿಎಫ್‌ಪಿ 2010 ಬೆಂಗಳೂರು, ದಿನಾಂಕ:30-04-2010.

4. ಆಯುಷ್ ನಿರ್ದೇಶನಾಲಯದ ಮುಖ್ಯ ಆಡಳಿತಾಧಿಕಾರಿಯವರ ಪತ್ರ ಸಂಖ್ಯೆ: ಆಯುಷ್ 211:ಸಿ(2) 2010-11 ದಿನಾಂಕ: 23-03-2011.

5. ಮಾನ್ಯ ಉಚ್ಚನ್ಯಾಯಾಲಯದ ಸಹಾಯಕ ರಿಜಿಸ್ಟ್ರಾರ್‌ರವರ ಪತ್ರ ಸಂಖ್ಯೆ.ಎಫ್‌ಸಿಎ II/82/2007 ದಿನಾಂಕ: 14-2-2012.

*****

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ಆದೇಶದಲ್ಲಿ ಸರ್ಕಾರದ ವಿವಿಧ ಇಲಾಖೆಗಳ ಮುಖ್ಯಸ್ಥರುಗಳು ಮತ್ತು ಇತರೆ ಅಧಿಕಾರಿಗಳ ಆರ್ಥಿಕ ಅಧಿಕಾರವನ್ನು ಹೆಚ್ಚಿಸಿ ಪರಿಷ್ಕೃತ ಆದೇಶವನ್ನು ಹೊರಡಿಸಲಾಗಿತ್ತು. ಮೇಲೆ (2)ರಲ್ಲಿ ಓದಲಾದ ಆದೇಶದ ಕ್ರಮ ಸಂಖ್ಯೆ 14 ರಲ್ಲಿ ಇಲಾಖಾ ಮುಖ್ಯಸ್ಥರುಗಳಿಗೆ ಅನಿಮಯ ಅಂಶಕಾಲಿಕ ಕೆಲಸದಾಳುಗಳ ಮಾಸಿಕ ಸಂಚಿತ ಸಂಭಾವನೆಯ ಮಿತಿಯನ್ನು ಹೆಚ್ಚಿಸಿ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಲಾಗಿತ್ತು. ಹಿಂದಿನ ದಿನಾಂಕ: 2-2-2001ರ ಆದೇಶವನ್ನು ಉತ್ತಮಿಸಿ (Supersede) ಇಲಾಖಾ ಮುಖ್ಯಸ್ಥರುಗಳು ಹಾಗೂ ಇತರೆ ಅಧಿಕಾರಿಗಳಿಗೆ ಆರ್ಥಿಕ ಅಧಿಕಾರವನ್ನು ಪರಿಷ್ಕರಿಸಿ ಹೊರಡಿಸಲಾದ ಮೇಲೆ (3)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಅನಿಮಯ ಅಂಶಕಾಲಿಕ ಕೆಲಸದಾಳುಗಳ ಸೇವೆಯನ್ನು ಪಡೆಯುವ ಅಧಿಕಾರವನ್ನು ಹಿಂತೆಗೆದುಕೊಳ್ಳಲಾಗಿರುತ್ತದೆ. ಇದಕ್ಕೆ ಬದಲಾಗಿ ದಿನಾಂಕ: 30-4-2010ರ ಸರ್ಕಾರದ ಆದೇಶದಲ್ಲಿನ ಕ್ರಮ ಸಂಖ್ಯೆ 25 ರಲ್ಲಿ ಖಾಲಿ ಇರುವ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದಲ್ಲಿ ತಗೆದುಕೊಳ್ಳುವ ಅಧಿಕಾರವನ್ನು ಇಲಾಖಾ ಮುಖ್ಯಸ್ಥರುಗಳಿಗೆ ನೀಡಲಾಗಿರುತ್ತದೆ.

ಮೇಲೆ (4)ರಲ್ಲಿ ಓದಲಾದ ಪತ್ರದಲ್ಲಿ ಮುಖ್ಯ ಆಡಳಿತಾಧಿಕಾರಿಗಳು, ಆಯುಷ್ ನಿರ್ದೇಶನಾಲಯ ಇವರು ಸ್ವಚ್ಛತೆ ಮುಂತಾದ ಕಾರ್ಯಗಳಿಗೆ ಹೊರಗುತ್ತಿಗೆ ಆಧಾರದಲ್ಲಿ ಸಿಬ್ಬಂದಿಯ ಸೇವೆಯನ್ನು ಪೂರ್ಣ ದಿನಗಳಿಗೆ ಪಡೆದಲ್ಲಿ ಹೆಚ್ಚಿನ ವೆಚ್ಚವಾಗುವುದಾಗಿ, ಈ ವ್ಯವಸ್ಥೆಗೆ ಅನಿಮಯ ಅಂಶಕಾಲಿಕ ಕೆಲಸದಾಳುಗಳ ಸೇವೆಯನ್ನು ಪಡೆದಲ್ಲಿ ಸರ್ಕಾರಕ್ಕೆ ಉಳಿತಾಯವಾಗುವುದಲ್ಲದೆ ಅವರ ಮೇಲೆ ನಿಯಂತ್ರಣವಿರುವುದರಿಂದ ಇವರ ಸೇವೆಯನ್ನು

...2

ಪಡೆಯುವುದನ್ನು ಮರುಪ್ರಾರಂಭಿಸಲು ಹಿಂದಿನ ಆದೇಶಗಳಲ್ಲಿದ್ದ ಆರ್ಥಿಕ ಅಧಿಕಾರವನ್ನು ಸೇರ್ಪಡಿಸಿ ಪರಿಷ್ಕೃತ ಆದೇಶ ಹೊರಡಿಸಲು ಕೋರಿರುತ್ತಾರೆ. ಮೇಲೆ (5)ರಲ್ಲಿ ಓದಲಾದ ಪತ್ರದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ಸಹಾಯಕ ರಿಜಿಸ್ಟ್ರಾರ್ ರವರು ಸಹಾ ಅನಿಪುಣ ಅಂಶಕಾಲಿಕ ಕೆಲಸದಾಳುಗಳ ಸೇವೆಯನ್ನು ಪಡೆಯುವ ಬಗ್ಗೆ ಅನುಮತಿ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಸರ್ಕಾರವು ಅನಿಪುಣ ಅಂಶಕಾಲಿಕ ಕೆಲಸದಾಳುಗಳ ಸೇವೆಯನ್ನು ಪಡೆಯುವುದನ್ನು ಸಾದಿಲ್ವಾರು ವೆಚ್ಚ ಕೈಪಿಡಿ ನಿಯಮ 7ರ ಟಿಪ್ಪಣಿ-2 ಮತ್ತು 55(2)(ಬಿ) ಪ್ರಕಾರ ಪುನ: ಪ್ರಾರಂಭಿಸಲು ಹಾಗೂ ಇವರ ಮಾಸಿಕ ಸಂಚಿತ ಸಂಭಾವನೆಯ ಗರಿಷ್ಠ ಮಿತಿಯನ್ನು ಪರಿಷ್ಕರಿಸಲು ತೀರ್ಮಾನಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಆಇ 05 ಟಿಎಫ್‌ಪಿ 2012,**
**ಬೆಂಗಳೂರು, ದಿನಾಂಕ:26-06-2012.**

ಸಾದಿಲ್ವಾರು ವೆಚ್ಚ ಕೈಪಿಡಿ ನಿಯಮ 7ರ ಟಿಪ್ಪಣಿ-2 ಮತ್ತು 55 (2) (ಬಿ) ಪ್ರಕಾರ ಎಲ್ಲಾ ಇಲಾಖಾ ಮುಖ್ಯಸ್ಥರುಗಳು ಮತ್ತು ಇತರೆ ಅಧಿಕಾರಿಗಳಿಗೆ ಒಟ್ಟಾರೆ ಮೂರು ವರ್ಷಗಳ ಅವಧಿ ಮೀರದಂತೆ ಸಾದಿಲ್ವಾರು ವೆಚ್ಚದಲ್ಲಿ ಅನಿಪುಣ ಅಂಶಕಾಲಿಕ ಕೆಲಸದಾಳುಗಳ ಸೇವೆಯನ್ನು ಪಡೆಯುವುದನ್ನು ಪುನ: ಪ್ರಾರಂಭಿಸಲು ಮತ್ತು ಮಾಸಿಕ ಸಂಚಿತ ಸಂಭಾವನೆ ಯನ್ನು ಮಂಜೂರು ಮಾಡುವ ಆರ್ಥಿಕ ಅಧಿಕಾರವನ್ನು ಪ್ರತ್ಯಾಯೋಜಿಸಲು ಮಂಜೂರಾತಿ ನೀಡಲಾಗಿದೆ.

ಈ ಕೆಳಗಿನಂತೆ ಅನಿಪುಣ ಅಂಶಕಾಲಿಕ ಕೆಲಸದಾಳುಗಳ ಮಾಸಿಕ ಸಂಚಿತ ಸಂಭಾವನೆಯನ್ನು ಪರಿಷ್ಕರಿಸಿ ಮಂಜೂರಾತಿ ನೀಡಲಾಗಿದೆ.

...3

| ಅಧಿಕಾರದ ವಿವರಗಳು | ಇಲಾಖಾ ಮುಖ್ಯಸ್ಥರುಗಳು | ವಿಭಾಗೀಯ ಮಟ್ಟದ ಅಧಿಕಾರಿಗಳು | ಜಿಲ್ಲಾ ಮಟ್ಟದ ಅಧಿಕಾರಿಗಳು | ಉ.ವಿ.ಮಟ್ಟದ ಅಧಿಕಾರಿಗಳು | ತಾಲ್ಲೂಕು ಮಟ್ಟದ ಅಧಿಕಾರಿಗಳು |
|---|---|---|---|---|---|
| ಅಧೀನ ಕಛೇರಿಗಳಲ್ಲಿ ಒಟ್ಟಾರೆ ಮೂರು ವರ್ಷಗಳು ಮೀರದಂತೆ ಸಾದಿಲ್ವಾರು ವೆಚ್ಚದಲ್ಲಿ ಸಂದಾಯವಾಗಬೇಕಾದ ಅನಿಯತ ಅಂಶಕಾಲಿಕ ಕೆಲಸದಾಳುಗಳ ಸೇವೆಯನ್ನು ಪಡೆಯಲು ಮಂಜೂರಾತಿ. (ಸಾ.ವೆ.ಕೈ. ನಿಯಮ 7 ರ ಟಿಪ್ಪಣಿ-2 ಮತ್ತು 55(2) (b). | ಗರಿಷ್ಟ ರೂ.3500/- ರವರೆಗೆ ಪ್ರತಿ ತಿಂಗಳು ಪ್ರತಿ ಕೆಲಸದಾಳಿಗೆ | ಗರಿಷ್ಟ ರೂ.3500/- ಗಳವರೆಗೆ ಪ್ರತಿ ತಿಂಗಳು ಪ್ರತಿ ಕೆಲಸದಾಳಿಗೆ | ಗರಿಷ್ಟ ರೂ.3000/- ಗಳವರೆಗೆ ಪ್ರತಿ ತಿಂಗಳು ಪ್ರತಿ ಕೆಲಸದಾಳಿಗೆ | ಗರಿಷ್ಟ ರೂ.2500/- ಗಳವರೆಗೆ ಪ್ರತಿ ತಿಂಗಳು ಪ್ರತಿ ಕೆಲಸದಾಳಿಗೆ | ಗರಿಷ್ಟ ರೂ.2000/- ಗಳವರೆಗೆ ಪ್ರತಿ ತಿಂಗಳು ಪ್ರತಿ ಕೆಲಸದಾಳಿಗೆ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ಸಿ. ಶಾಮರಾವ್)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ
(ಆರ್ಥಿಕ ನಿಯಮಗಳು, ಆಯವ್ಯಯ ಸಂಕಲನ
ಮತ್ತು ಸಮಿತಿ ಶಾಖೆ).

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ಮುಂದಿನ ರಾಜ್ಯಪತ್ರ ಸಂಚಿಕೆಯಲ್ಲಿ ಪ್ರಕಟಿಸಿ 25 ಪ್ರತಿಗಳನ್ನು ಒದಗಿಸುವುದು.

ಪ್ರತಿಗಳು:

1. ಮಹಾಲೇಖಪಾಲರು (ಎ ಮತ್ತು ಇ), / ಪ್ರಧಾನ ಮಹಾಲೇಖಪಾಲರು (ಸಿ & ಸಿಎ) ಮತ್ತು ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ರೆಸಿಡೆನ್ಸಿ ಪಾರ್ಕ್ ರಸ್ತೆ, ಅಂಚೆ ಪೆಟ್ಟಿಗೆ ಸಂ. 5329/5369, ಬೆಂಗಳೂರು-1.
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ ಮತ್ತು ಕಾರ್ಯದರ್ಶಿ.
4. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
5. ಎಲ್ಲಾ ಜಿಲ್ಲಾಧಿಕಾರಿಗಳು.
6. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
7. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಬೆಂಗಳೂರು.
8. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು.
9. ಸರ್ಕಾರದ ಉಪ ಕಾರ್ಯದರ್ಶಿಗಳು/ಸರ್ಕಾರದ ಅಧೀನ ಕಾರ್ಯದರ್ಶಿಗಳು/ ಶಾಖಾಧಿಕಾರಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
10. ಹೆಚ್ಚುವರಿ ಪ್ರತಿಗಳು.
11. ಶಾಖಾ ರಕ್ಷಿತ ಕಡತ.